# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 102 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 19-12-2022 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

************

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಥಾಮಸ್ ವರದಿ ಶಿಫಾರಸ್ಸನ್ನು ಜಾರಿಗೊಳಿಸಲು ಸರ್ಕಾರ ಯಾವಾಗ ಒಪ್ಪಿಗೆ ಸೂಚಿಸಿದೆ. | ಸರ್ಕಾರಿ ಆದೇಶ ಸಂಖ್ಯೆ: ಕಾಇ 303 ಇಟಿಐ 2014 ಬೆಂಗಳೂರು, ದಿನಾಂಕ:29.12.2014. ರ ಆದೇಶದಲ್ಲಿ ಶ್ರೀ ಪಿ.ಎಸ್.ಎಸ್.ಥಾಮಸ್ ವರದಿಯ ಶಿಫಾರಸ್ಸಿನನ್ವಯ ರಾಜ್ಯದಲ್ಲಿನ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗೆ ಇರುವಂತೆ ಪಿಂಚಣಿ, ಗ್ರ್ಯಾಚ್ಯುಯಿಟಿ, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಿಬ್ಬಂದಿಗೆ ಭವಿಷ್ಯವರ್ತಿಯಾಗಿ (Prospective) ನೀಡಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.<br><br>ಪಿಂಚಣಿ ಮತ್ತು ಗ್ರ್ಯಾಚ್ಯುಯಿಟಿ ಸೌಲಭ್ಯವು ರಾಜ್ಯದ 196 ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ದಿನಾಂಕ: 01.04.2006ರ ಪೂರ್ವದಲ್ಲಿ ನೇಮಕಾತಿ ಹೊಂದಿರುವ ಸಿಬ್ಬಂದಿಗೆ ಮಾತ್ರ ಅನ್ವಯಿಸುತ್ತದೆ.<br><br>ಸರ್ಕಾರಿ ಆದೇಶ ಸಂಖ್ಯೆ: ಕಾಇ 303 ಇಟಿಐ 2014 ಬೆಂಗಳೂರು, ದಿನಾಂಕ: 14.11.2016ರಲ್ಲಿ ಸೇವಾ ಸೌಲಭ್ಯಗಳಾದ 10ವರ್ಷಗಳ ಕಾಲಬದ್ಧ ಮುಂಬಡ್ತಿ, 15 ವರ್ಷಗಳ ಸ್ವಯಂ ಚಾಲಿತ ವೇತನ ಮುಂಬಡ್ತಿ, 20-25 ವರ್ಷಗಳ ಹೆಚ್ಚುವರಿ ವೇತನ ಬಡ್ತಿ, ಪಿಂಚಣಿ, ಕುಟುಂಬ ಪಿಂಚಣಿ, ನಿವೃತ್ತಿ ಉಪದಾನ, ಮರಣ ಉಪದಾನ, ಗಳಿಕೆ ರಜೆ ನಗದೀಕರಣ, ಪರಿವರ್ತಿತ ಪಿಂಚಣಿ ಮೌಲ್ಯ ಸೌಲಭ್ಯವನ್ನು ನೀಡಲು ಆದೇಶಿಸಲಾಗಿದೆ. |
| ಆ) | ಸದರಿ ಶಿಫಾರಸ್ಸಿನಂತೆ ಇದುವರೆವಿಗೂ ಯಾವ ಯಾವ ಸೌಲಭ್ಯಗಳನ್ನು ನೌಕರರಿಗೆ ಕಲ್ಪಿಸಲಾಗಿದೆ; | 10 ವರ್ಷಗಳ ಕಾಲಬದ್ಧ ಮುಂಬಡ್ತಿ, 15 ವರ್ಷಗಳ ಸ್ವಯಂ ಚಾಲಿತ ವೇತನ ಮುಂಬಡ್ತಿ, 20-25 ವರ್ಷಗಳ ಹೆಚ್ಚುವರಿ ವೇತನ ಬಡ್ತಿ, ಪಿಂಚಣಿ, ಕುಟುಂಬ ಪಿಂಚಣಿ, ನಿವೃತ್ತಿ ಉಪದಾನ, ಮರಣ ಉಪದಾನ, ಗಳಿಕೆ ರಜೆ ನಗದೀಕರಣ, ಪರಿವರ್ತಿತ ಪಿಂಚಣಿ ಮೌಲ್ಯ ಸೌಲಭ್ಯಗಳನ್ನು ನೀಡಲಾಗಿದೆ. |
| ಇ) | ಸರ್ಕಾರದ ಒಪ್ಪಿಗೆಯಂತೆ ಇದುವರೆವಿಗೂ ಕಲ್ಪಿಸದಿರುವ ಸೌಲಭ್ಯಗಳಾವುವು; (ವಿವರಗಳೊಡನೆ ಮಾಹಿತಿ ನೀಡುವುದು) | ಸರ್ಕಾರದ ಆದೇಶದಂತೆ ಎಲ್ಲಾ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. |
| ಈ) | ಸದರಿ ಸೌಲಭ್ಯಗಳನ್ನು ಯಾವ ಕಾಲಮಿತಿಯಲ್ಲಿ ಕಲ್ಪಿಸಲಾಗುವುದು? | ಅನ್ವಯಿಸುವುದಿಲ್ಲ. |

**ಸಂಖ್ಯೆ: ಕೌಉಜೀಇ 93 ಕೈತಪ್ರ 2022**

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು.